RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| ಭಾಗ-V | ಬೆಂಗಳೂರು, ಶುಕ್ರವಾರ, ನವೆಂಬರ್ ೨೪, ೨೦೧೭ (ಮಾರ್ಗಶಿರ ೩, ಶಕ ವರ್ಷ ೧೯೩೯) | ನಂ.೧೦೬೪ |
|---|---|---|
| Part-V | Bengaluru, Friday, November 24, 2017 (Margashira 3, Shaka Varsha 1939) | No. 1064 |


ಕರ್ನಾಟಕ ವಿಧಾನಸಭೆ

KARNATAKA LEGISLATIVE ASSEMBLY

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ಸಂ.5074, ವಿಧಾನ ಸೌಧ, ಬೆಂಗಳೂರು-560 233.

LEGISLATIVE ASSEMBLY SECRETARIAT,P.B. NO.5074, VIDHANA SOUDHA,BENGALURU-560 233.

ಅಧಿಸೂಚನೆ

ಸಂಖ್ಯೆ: ಕವಿಸಸ/ಆ-1/67/ವಿ.ಹು.ನೇ.ನೇ.ಭ/2017, ದಿನಾಂಕ/Dated: 24.11.2017.

ವಿಷಯ: ಕರ್ನಾಟಕ ವಿಧಾನಸಭೆ ಸಚಿವಾಲಯದಲ್ಲಿ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡುವ ಬಗ್ಗೆ.

ಕರ್ನಾಟಕ ವಿದಾನಸಭೆ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು) (ತಿದ್ದುಪಡಿ) ನಿಯಮಾವಳಿಗಳು 2003ರ ನಿಯಮ 6(viii)ರ ಅವಕಾಶದಡಿ ಕರ್ನಾಟಕ ವಿಧಾನಸಭೆ ಸಚಿವಾಲಯದ ಕೆಳಕಂಡ ವಿವಿಧ ವೃಂದಗಳ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹುದ್ದೆಗಳ ವಿವರಗಳು ಈ ಕೆಳಕಂಡಂತಿರುತ್ತದೆ.

1. ಹುದ್ದೆಯ ಹೆಸರು: ಸಹಾಯಕ ಗ್ರಂಥಪಾಲಕರು

ಹುದ್ದೆಗಳ ಸಂಖ್ಯೆ: 01 ಹುದ್ದೆ

ವೇತನ ಶ್ರೇಣಿ: ರೂ.22800-600-24600-700-28800-800-33600-900-39000-1050-43200

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಸಾಮಾನ್ಯ | 01 | -- | -- | -- | -- | -- | 01 |

2. ಹುದ್ದೆಯ ಹೆಸರು: ವರದಿಗಾರರು

ಹುದ್ದೆಗಳ ಸಂಖ್ಯೆ: ಕನ್ನಡ ವರದಿಗಾರ - 02 ಹುದ್ದೆಗಳು

ಆಂಗ್ಲ ವರದಿಗಾರ - 03 ಹುದ್ದೆಗಳು

ವೇತನ ಶ್ರೇಣಿ: ರೂ.20000-500-21000-600-24600-700-28800-800-33600-900-36300

ಮೀಸಲಾತಿ ವರ್ಗೀಕರಣ: ಕನ್ನಡ ವರದಿಗಾರರು

| ಕ್ರ.ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | II ಎ | -- | 01 | -- | -- | -- | -- | 01 |
| 2 | ಪ್ರವರ್ಗ- I | -- | 01 | -- | -- | -- | -- | 01 |

ಮೀಸಲಾತಿ ವರ್ಗೀಕರಣ: ಆಂಗ್ಲ ವರದಿಗಾರರು

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಸಾಮಾನ್ಯ | -- | -- | -- | 01 | 01 | -- | 02 |
| 2 | ಪ.ಜಾ. | -- | -- | -- | 01 | -- | -- | 01 |

3. ಹುದ್ದೆಯ ಹೆಸರು: ಗ್ರಂಥಾಲಯ ಸಹಾಯಕ

ಹುದ್ದೆಗಳ ಸಂಖ್ಯೆ: 03 ಹುದ್ದೆಗಳು

ವೇತನ ಶ್ರೇಣಿ: ರೂ.16000-400-17200-450-19000-500-21000-600-24600-700-28800-800-29600

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | 01 |
| 2 | ಸಾಮಾನ್ಯ | 01 | -- | -- | -- | -- | -- | 01 |
| 3 | ಪ.ಪಂ | 01 | -- | -- | -- | -- | -- | 01 |

4. ಹುದ್ದೆಯ ಹೆಸರು: ಕಂಪ್ಯೂಟರ್ ಆಪರೇಟರ್

ಹುದ್ದೆಗಳ ಸಂಖ್ಯೆ: 06 ಹುದ್ದೆಗಳು

ವೇತನ ಶ್ರೇಣಿ: ರೂ.16000-400-17200-450-19000-500-21000-600-24600-700-28800-800-29600

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಪ್ರವರ್ಗ-I | 01 | -- | -- | -- | -- | -- | 01 |
| 2 | ಸಾಮಾನ್ಯ | 01 | 01 | -- | 01 | -- | -- | 03 |
| 3 | II ಎ | 01 | -- | -- | -- | -- | -- | 01 |
| 4 | ಪ.ಜಾ. | -- | 01 | -- | -- | -- | -- | 01 |

5. ಹುದ್ದೆಯ ಹೆಸರು: ಸೂಪರ್ ವೈಸರ್-ಕಂ-ಕೋಚ್

ಹುದ್ದೆಗಳ ಸಂಖ್ಯೆ: 01 ಹುದ್ದೆ

ವೇತನ ಶ್ರೇಣಿ: ರೂ.16000-400-17200-450-19000-500-21000-600-24600-700-28800-800-29600

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಸಾಮಾನ್ಯ | 01 | -- | -- | -- | -- | -- | 01 |

6. ಹುದ್ದೆಯ ಹೆಸರು: ಕಿರಿಯ ಗ್ರಂಥಾಲಯ ಸಹಾಯಕ

ಹುದ್ದೆಗಳ ಸಂಖ್ಯೆ: 02 ಹುದ್ದೆಗಳು

ವೇತನ ಶ್ರೇಣಿ: ರೂ.11600-200-12000-250-13000-300-14200-350-15600-400-17200-450-19000-500-21000

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಪ.ಜಾ. | 01 | -- | -- | -- | -- | -- | 01 |
| 2 | ಸಾಮಾನ್ಯ | 01 | -- | -- | -- | -- | -- | 01 |

7. ಹುದ್ದೆಯ ಹೆಸರು: ಕಿರಿಯ ಸಹಾಯಕರು

ಹುದ್ದೆಗಳ ಸಂಖ್ಯೆ: 10 ಹುದ್ದೆಗಳು

ವೇತನ ಶ್ರೇಣಿ: ರೂ. 11600-200-12000-250-13000-300-14200-350-15600-400-17200-450-19000-500-21000

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | III ಬಿ | -- | 01 | -- | -- | -- | -- | 01 |
| 2 | ಪ.ಜಾ | -- | 01 | -- | 01 | -- | -- | 02 |
| 3 | II ಎ | -- | 01 | -- | 01 | -- | -- | 02 |
| 4 | ಸಾಮಾನ್ಯ | 01 | 01 | -- | 02 | -- | -- | 04 |
| 5 | ಪ್ರವರ್ಗ-1 | -- | -- | -- | 01 | -- | -- | 01 |

8. ಹುದ್ದೆಯ ಹೆಸರು: ವಾಹನ ಚಾಲಕರು

ಹುದ್ದೆಗಳ ಸಂಖ್ಯೆ: 08 ಹುದ್ದೆಗಳು

ವೇತನ ಶ್ರೇಣಿ: ರೂ. 11600-200-12000-250-13000-300-14200-350-15600-400-17200-450-19000-500-21000

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| 1 | ಪ.ಜಾ | 02 | -- | -- | -- | -- | -- | 02 |
| 2 | II ಎ | 01 | -- | -- | -- | -- | -- | 01 |
| 3 | ಪ.ಪಂ | 01 | -- | -- | 01 | -- | -- | 02 |
| 4 | III ಬಿ | 01 | -- | -- | -- | -- | -- | 01 |
| 5 | ಸಾಮಾನ್ಯ | 01 | -- | 01 | -- | -- | -- | 02 |

**9. ಹುದ್ದೆಯ ಹೆಸರು: ದಲಾಯತ್**

**ಹುದ್ದೆಗಳ ಸಂಖ್ಯೆ: 16 ಹುದ್ದೆಗಳು**

**ವೇತನ ಶ್ರೇಣಿ: ರೂ.9600-200-12000-250-13000-300-14200-350-14550**

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮ ದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|
| 1 | ಪ.ಜಾ | -- | 01 | -- | 01 | 01 | -- | -- | 03 |
| 2 | ಸಾಮಾನ್ಯ | 01 | 03 | -- | 02 | -- | 01 | 01 | 08 |
| 3 | II ಎ | -- | 01 | -- | 01 | 01 | -- | -- | 03 |
| 4 | ಪ್ರವರ್ಗ-1 | -- | 01 | -- | -- | -- | -- | -- | 01 |
| 5 | II ಬಿ | -- | 01 | -- | -- | -- | -- | -- | 01 |

**10. ಹುದ್ದೆಯ ಹೆಸರು: ಸ್ವೀಪರ್**

**ಹುದ್ದೆಗಳ ಸಂಖ್ಯೆ: 38 ಹುದ್ದೆಗಳು**

**ವೇತನ ಶ್ರೇಣಿ: ರೂ.9600-200-12000-250-13000-300-14200-350-14550**

ಮೀಸಲಾತಿ ವರ್ಗೀಕರಣ:

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅರ್ಹತೆ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|---|
| 1 | ಪ.ಜಾ | 01 | 02 | -- | 02 | 01 | -- | --- | 06 |
| 2 | ಸಾಮಾನ್ಯ | 03 | 07 | 01 | 05 | 01 | 01 | 01 | 19 |
| 3 | ಪ.ಪಂ | 01 | -- | -- | -- | -- | -- | -- | 01 |
| 4 | ಪ್ರವರ್ಗ-1 | 01 | 01 | -- | -- | -- | -- | -- | 02 |
| 5 | II ಎ | 01 | 02 | -- | 02 | 01 | -- | -- | 06 |

| | | | | | | | | | |
|---|---|---|---|---|---|---|---|---|---|
| 6 | II ಬಿ | 01 | 01 | -- | -- | -- | -- | -- | 02 |
| 7 | III ಎ | 01 | -- | -- | -- | -- | -- | -- | 01 |
| 8 | III ಬಿ | 01 | -- | -- | -- | -- | -- | -- | 01 |

1. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-12-2017.
2. ಅರ್ಜಿ ಸಲ್ಲಿಸಬೇಕಾದ ವಿಳಾಸ: ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:5074, ಮೊದಲನೆ ಮಹಡಿ, ವಿದಾನಸೌಧ, ಬೆಂಗಳೂರು-560 233.
3. ಕರ್ನಾಟಕ ವಿದಾನಸಭೆ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಾವಳಿಗಳನುಸಾರ ಮೇಲ್ಕಂಡ ಹುದ್ದೆಯ ಭರ್ತಿಗಾಗಿ ಅರ್ಹತೆಯುಳ್ಳ ಅಭ್ಯರ್ಥಿಗಳು ಅರ್ಜಿ ನಮೂನೆ-1ರ ದ್ವಿಪ್ರತಿಯಲ್ಲಿ ಅರ್ಜಿಗಳನ್ನು ಸರ್ಕಾರಿ ಪುಸ್ತಕ ಮಳಿಗೆಯಿಂದ ಪಡೆದು ವಿಧಾನಸಭೆ ಸಚಿವಾಲಯಕ್ಕೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಲ್ಲಿಸಬೇಕು. (ಅರ್ಜಿ ನಮೂನೆಯು ಸರ್ಕಾರಿ ಮುದ್ರಣಾಲಯದಲ್ಲಿ ದೊರೆಯುವುದು).
4. ವಿದ್ಯಾರ್ಹತೆ: ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ಪ್ರಕಾರ ಅಭ್ಯರ್ಥಿಗಳು ನೇರ ನೇಮಕಾತಿಗೆ ಅರ್ಹತೆಯನ್ನು ಪಡೆದಿರಬೇಕು ಹಾಗೂ ಅವನು / ಅವಳು ಕೆಳಗೆ ತಿಳಿಸಿರುವ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

| ಕ್ರ.ಸಂ. | ಹುದ್ದೆಯ ಹೆಸರು | ವಿದ್ಯಾರ್ಹತೆ |
|---|---|---|
| 1 | ಸಹಾಯಕ ಗ್ರಂಥಪಾಲಕರು | ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಲೈಬ್ರರಿ ಸೈನ್ಸ್ ಮತ್ತು ಇನ್ಫಾರ್ಮೇಷನ್ ಸೈನ್ಸ್ ನಲ್ಲಿ ಪದವಿ ಹೊಂದಿರಬೇಕು ಅಥವಾ ಲೈಬ್ರರಿ ಸೈನ್ಸ್ ಮತ್ತು ಇನ್ಫಾರ್ಮೇಷನ್ ಸೈನ್ಸ್ ನಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು ಹಾಗೂ ಗಣಕಯಂತ್ರದ ಜ್ಞಾನ ಹೊಂದಿರಬೇಕು. |
| 2 | ಕನ್ನಡ ವರದಿಗಾರ/ ಆಂಗ್ಲ ವರದಿಗಾರ | 1. ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿ ಪಡೆದಿರಬೇಕು.<br>2. ಕನ್ನಡ ವರದಿಗಾರರಿಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸಿರುವ ಪ್ರವೀಣ ದರ್ಜೆಯ ಕನ್ನಡ ಶೀಘ್ರಲಿಪಿ ಹಾಗೂ ಪ್ರೌಢ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.<br>3. ಆಂಗ್ಲ ವರದಿಗಾರರಿಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸಿರುವ ಪ್ರವೀಣ ದರ್ಜೆಯ ಆಂಗ್ಲ ಶೀಘ್ರಲಿಪಿ ಹಾಗೂ ಪ್ರೌಢ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು<br>4. ಹಿಂದಿ ಪ್ರವೀಣ ದರ್ಜೆಯ ಶೀಘ್ರಲಿಪಿಯಲ್ಲಿ ಉತ್ತೀರ್ಣರಾದವರಿಗೆ ಆದ್ಯತೆ ನೀಡಲಾಗುವುದು. |
| 3 | ಗ್ರಂಥಾಲಯ ಸಹಾಯಕರು | ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಲೈಬ್ರರಿ ಸೈನ್ಸ್ ನಲ್ಲಿ ಪದವಿ ಹೊಂದಿರಬೇಕು ಹಾಗೂ ಗಣಕಯಂತ್ರದ ಸಾಮಾನ್ಯ ಜ್ಞಾನ ಹೊಂದಿರಬೇಕು. |
| 4 | ಕಂಪ್ಯೂಟರ್ ಆಪರೇಟರ್ | ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಕಂಪ್ಯೂಟರ್ ಅಪ್ಲಿಕೇಷನ್(ಬಿ.ಸಿ.ಎ.) ಅಥವಾ ಕಂಪ್ಯೂಟರ್ ಸೈನ್ಸ್/ಎಲೆಕ್ಟ್ರಾನಿಕ್ಸ್ ಬಿ.ಎಸ್ಸಿ. ಪದವಿ ಹೊಂದಿರಬೇಕು |

| | | |
|---|---|---|
| 5 | ಸೂಪರ್ ವೈಸರ್-ಕಂ-ಕೋಚ್ | 1. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು<br>2. ಯಾವುದೇ ಹೆಲ್ತ್ ಕ್ಲಬ್ ನಲ್ಲಿ ಸೂಪರ್ ವೈಸರ್-ಕಂ-ಕೋಚ್ ಹುದ್ದೆಯಲ್ಲಿ ಕಾರ್ಯನಿರ್ವಹಿಸಿರುವ ಐದು(05) ವರ್ಷಗಳ ಅನುಭವ ಹೊಂದಿರಬೇಕು. |
| 6 | ಕಿರಿಯ ಗ್ರಂಥಾಲಯ ಸಹಾಯಕ | ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಲೈಬ್ರರಿ ಸೈನ್ಸ್ ನಲ್ಲಿ ಪದವಿ ಹೊಂದಿರಬೇಕು ಹಾಗೂ ಗಣಕಯಂತ್ರದ ಜ್ಞಾನ ಹೊಂದಿರಬೇಕು. |
| 7 | ಕಿರಿಯ ಸಹಾಯಕರು | 1. ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಹೊಂದಿರಬೇಕು ಹಾಗೂ ಗಣಕಯಂತ್ರದ ಸಾಮಾನ್ಯ ಜ್ಞಾನ ಹೊಂದಿರಬೇಕು.<br>2. ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿ ಪಡೆದಿರುವ ಕರ್ನಾಟಕ ವಿಧಾನಸಭೆ ಸಚಿವಾಲಯದ ಗ್ರೂಪ್ 'ಡಿ' ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಆದ್ಯತೆ ನೀಡಲಾಗುವುದು. |
| 8 | ವಾಹನ ಚಾಲಕರು | 1. 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು<br>2. ಇತ್ತೀಚಿನ ವಾಹನ ಚಾಲನಾ ಪರವಾನಗಿ ಹೊಂದಿರಬೇಕು<br>3. ಮೋಟಾರು ಕಾರು ಚಾಲನೆಯಲ್ಲಿ ಕನಿಷ್ಠ ಮೂರು(03) ವರ್ಷಗಳ ಅನುಭವ ಹೊಂದಿರಬೇಕು |
| 9 | ದಲಾಯತ್ | 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು |
| 10 | ಸ್ವೀಪರ್ | 4ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು |

5. ವಯೋಮಿತಿ: ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

   ಗರಿಷ್ಠ ವಯೋಮಿತಿ:-

   ಸಾಮಾನ್ಯ ವರ್ಗ : 35 ವರ್ಷ

   ಪ್ರವರ್ಗ IIಎ, IIಬಿ, IIIಎ ಮತ್ತು IIIಬಿ : 38 ವರ್ಷ

   ಪ.ಜಾ. / ಪ.ಪಂ. / ಪ್ರವರ್ಗ- I : 40 ವರ್ಷ

6. ಸರ್ಕಾರಿ ಇಲಾಖೆಗಳಲ್ಲಿ ಈಗಾಗಲೇ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಗಳನ್ನು ತಮ್ಮ ನೇಮಕಾತಿ ಪ್ರಾಧಿಕಾರದ ಮೂಲಕವೇ ನಿಗಧಿತ ದಿನಾಂಕದೊಳಗೆ ಸಲ್ಲಿಸಬೇಕು.

7. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳು 1977ರ ಪ್ರಕಾರ, ರಾಜ್ಯ ಸಿವಿಲ್ ಸೇವೆಗಳಲ್ಲಿ ಹುದ್ದೆಗಳಿಗೆ ನೇಮಕಾತಿ ಹೊಂದಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹರಾಗಿರುತ್ತಾರೆ.

8. (1) ಆಯ್ಕೆಯಾದ ಯಾವುದೇ ಅಭ್ಯರ್ಥಿಯು, ನೇಮಕಾತಿ ಪ್ರಾಧಿಕಾರಕ್ಕೆ ಅವನು / ಅವಳು ನೇಮಿಸಿರುವ ಕೆಲಸಕ್ಕೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಯೋಗ್ಯವೆನಿಸಿದ ಹೊರತು ಅವನನ್ನು / ಅವಳನ್ನು ಆ ಹುದ್ದೆಗೆ ನೇಮಿಸಲಾಗುವುದಿಲ್ಲ.

   (2) ಸಕ್ಷಮ ನೇಮಕಾತಿ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

9. ಯಾವುದೇ ವ್ಯಕ್ತಿಯು ತನ್ನ ಉಮೇದುವಾರಿಕೆ ಬಗ್ಗೆ ಅಧಿಕಾರಿಗಳು ಮತ್ತು ಅಧಿಕಾರೇತರರುಗಳಿಂದ ಯಾವುದೇ ರೀತಿಯ ಒತ್ತಡ ತಂದಲ್ಲಿ ಸದರಿ ಹುದ್ದೆಯ ನೇಮಕಾತಿಗೆ ಅರ್ಹನಾಗುವುದಿಲ್ಲ.

10. ಶುಲ್ಕ: ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1ರ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ಇರುವುದಿಲ್ಲ. ಉಳಿದ, ಸಾಮಾನ್ಯ ವರ್ಗದ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಕ್ರಾಸ್ ಮಾಡಿದ ರೂ.100.00ರ ಇಂಡಿಯನ್ ಪೋಸ್ಟಲ್ ಆರ್ಡರ್ ಅನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 15 ದಿನಗಳೊಳಗಿರುವಂತೆ ಖರೀದಿಸಿ, ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ, ಮೊದಲನೆ ಮಹಡಿ, ವಿಧಾನಸೌಧ, ಬೆಂಗಳೂರು-560233, ಈ ವಿಳಾಸಕ್ಕೆ ಪಾವತಿ ಮಾಡಬೇಕು. ಅರ್ಜಿ ಶುಲ್ಕವನ್ನು ಒಮ್ಮೆ ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ.

11. ಅಭ್ಯರ್ಥಿಗಳು ಅರ್ಜಿಯೊಂದಿಗೆ ಈ ಕೆಳಗೆ ತಿಳಿಸಲಾಗಿರುವ ದಾಖಲೆಗಳ ಜೆರಾಕ್ಸ್ ಪ್ರತಿಗಳನ್ನು ದ್ವಿಪ್ರತಿಗಳಲ್ಲಿ ತಪ್ಪದೇ ಲಗತ್ತಿಸಬೇಕು.

(ಅ) ಹುಟ್ಟಿದ ತಾರೀಖಿಗೆ ಆಧಾರದ ದಾಖಲೆ ಪ್ರತಿ

(ಆ) ಹುದ್ದೆಗಳಿಗೆ ಸೂಚಿಸಲಾಗಿರುವ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ ಅಂಕಪಟ್ಟಿಗಳ ಹಾಗೂ ಪ್ರಮಾಣ ಪತ್ರಗಳ ನಕಲು ಪ್ರತಿ ಮತ್ತು ಇತರೆ ವಿದ್ಯಾರ್ಹತೆಯ ಪ್ರಮಾಣ ಪತ್ರದ ನಕಲು ಪ್ರತಿ.

(ಇ) ಅರ್ಜಿ ನಮೂನೆಯಲ್ಲಿ ನಿಗಧಿಪಡಿಸಿರುವಂತೆ ನಡತೆಯ (Conduct) ಬಗ್ಗೆ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಇತ್ತೀಚಿನ ಅಂದರೆ ಆರು ತಿಂಗಳ ಅವಧಿ ಮೀರದ ಪ್ರಮಾಣ ಪತ್ರಗಳು.

(ಈ) ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಸರ್ಕಾರದಿಂದ ನಿಗಧಿಪಡಿಸಿರುವ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

(ಉ) 1 ರಿಂದ 10ನೇ ತರಗತಿಯವರೆಗೆ ಕನ್ನಡ/ಗ್ರಾಮಾಂತರ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿದ್ದಕ್ಕಾಗಿ ಸಂಬಂಧಪಟ್ಟ ಶಿಕ್ಷಣಾಧಿಕಾರಿಗಳಿಂದ ಪಡೆದ ದೃಢೀಕರಣ ಪ್ರಮಾಣ ಪತ್ರ

(ಊ) ಯೋಜನೆಗಳಿಂದ ನಿರಾಶ್ರಿತಗೊಂಡಿದ್ದಕ್ಕೆ ಸಂಬಂಧಪಟ್ಟ ಜಿಲ್ಲಾಧಿಕಾರಿ/ತಹಸೀಲ್ದಾರರಿಂದ ಪಡೆದ ದೃಢೀಕರಣ ಪ್ರಮಾಣ ಪತ್ರ

(ಋ) ಮಾಜಿ ಸೈನಿಕರ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಮಾಜಿ ಸೈನಿಕ ಎಂಬುವುದಕ್ಕೆ ಸಂಬಂಧಿಸಿದ ದಾಖಲಾತಿಯನ್ನು ಸಲ್ಲಿಸತಕ್ಕದ್ದು.

(ಎ) ಅಂಗವಿಕಲ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಆಯ್ಕೆಯಾಗುವ ಹುದ್ದೆಗಳ ಕರ್ತವ್ಯವನ್ನು ನಿರ್ವಹಿಸಲು ಅರ್ಹರಾಗಿರುತ್ತಾರೆಂದು ವೈದ್ಯಕೀಯ ಪರಿವೀಕ್ಷಕರು ನೀಡುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

12. ಅರ್ಜಿಗಳನ್ನು ನಮೂನೆ 1ರ ದ್ವಿಪ್ರತಿಯಲ್ಲಿ ಅಗತ್ಯವುಳ್ಳ ದಾಖಲೆಗಳನ್ನು ಲಗತ್ತಿಸಿ, ಕೊನೆಯ ದಿನಾಂಕ: 30.12.2017 ರಂದು ಸಂಜೆ 4.00 ಗಂಟೆಯ ಒಳಗಾಗಿ ಖುದ್ದಾಗಿ ಅಥವಾ ಅಂಚೆಯ ಮೂಲಕ ತಲುಪಿಸತಕ್ಕದ್ದು, ಸದರಿ ದಿನಾಂಕವು ಸಾರ್ವಜನಿಕ ರಜಾ ದಿನವಾದಲ್ಲಿ ಮುಂದಿನ ಕೆಲಸದ ದಿನದಂದು ಅರ್ಜಿಯನ್ನು ಸಲ್ಲಿಸತಕ್ಕದ್ದು.

13. ಕರ್ನಾಟಕ ವಿಧಾನಸಭೆ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಾವಳಿಗಳು, 2003ರ ನಿಯಮ 6(viii)ರ ರೀತ್ಯಾ ಮಾನ್ಯ ಸಭಾಧ್ಯಕ್ಷರು ಸೂಚಿಸುವಂತೆ ಮೇಲ್ಕಂಡ ಹುದ್ದೆಗಳ ನೇಮಕಾತಿಗೆ ನಿಗಧಿತ ವಿದ್ಯಾರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಅಥವಾ ಮೌಖಿಕ ಪರೀಕ್ಷೆ ಅಥವಾ ಈ ಎರಡೂ ವಿಧಾನಗಳನ್ನು ಅನುಸರಿಸಿ ಯೋಗ್ಯ ಅಭ್ಯರ್ಥಿಗಳ ಆಯ್ಕೆಯನ್ನು ಮಾಡಲಾಗುವುದು.

14. ಕರ್ನಾಟಕ ವಿಧಾನಸಭೆ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಾವಳಿ, 2003ರ ರೀತ್ಯಾ ಹುದ್ದೆಗಳ ಆಯ್ಕೆ ಪ್ರಕ್ರಿಯೆಯ ಕಾರ್ಯ ವಿಧಾನವನ್ನು ನಿಗಧಿಪಡಿಸುವ ಅಧಿಕಾರ ಮಾನ್ಯ ಸಭಾಧ್ಯಕ್ಷರವರಿಗೆ ಇರುತ್ತದೆ.

15. ಆಯ್ಕೆಯಾಗಲಿರುವ ಅಭ್ಯರ್ಥಿಯ ಕುರಿತು ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಯಾವುದಾದರೂ ಕ್ರಿಮಿನಲ್ ಮೊಕದ್ದಮೆಗಳು ದಾಖಲಾಗಿವೆಯೇ ಎಂಬ ಬಗ್ಗೆ ಪೊಲೀಸ್ ಪರಿಶೀಲನೆ (Police Verification) ದೃಢೀಕರಣ ಪತ್ರವನ್ನು ಪಡೆದ ನಂತರ ನೇಮಕಾತಿಯ ಅಧಿಕೃತ ಜ್ಞಾಪನ ಹೊರಡಿಸಲಾಗುವುದು.

ವಿಶೇಷ ಸೂಚನೆ:

1. ಅರ್ಜಿಗಳ ಮೇಲೆ ಹುದ್ದೆಯ ಹೆಸರನ್ನು ಹಾಗೂ ಅರ್ಜಿದಾರರ ಹೆಸರು, ತಂದೆಯ ಹೆಸರು ಮತ್ತು ಸರಿಯಾದ ವಿಳಾಸವನ್ನು ದಪ್ಪ ಅಕ್ಷರಗಳನ್ನು ನಮೂದಿಸತಕ್ಕದ್ದು.
2. ಅರ್ಜಿಯನ್ನು ಸಲ್ಲಿಸಲು ನೀಡಿರುವ ಕಾಲಾವಧಿಯು ಸರ್ಕಾರಿ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸೇರಿದಂತೆ ಎಲ್ಲಾ ಅಭ್ಯರ್ಥಿಗಳಿಗೂ ಅನ್ವಯವಾಗುವುದು.
3. ನೇಮಕಾತಿ ಪ್ರಾಧಿಕಾರಿಯವರು ದೃಢೀಕರಿಸಿ ನೀಡಿರುವ ಹುದ್ದೆಗಳ ವರ್ಗೀಕರಣದನ್ವಯ ಮೇಲೆ ತಿಳಿಸಲಾಗಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಬದಲಾವಣೆಗೆ ಒಳಪಟ್ಟಿರುತ್ತದೆ.
4. ಅಗತ್ಯ ಪ್ರಮಾಣ ಪತ್ರಗಳನ್ನು ಲಗತ್ತಿಸದೆ ಇರುವ, ಲೋಪ / ಅಪೂರ್ಣ ಅರ್ಜಿಗಳನ್ನು ಹಾಗೂ ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಲಗತ್ತಿಸಬಾರದು.
6. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಿದ ನಂತರ ಆ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಸಭಾಧ್ಯಕ್ಷರ ಆದೇಶಾನುಸಾರ,

ಎಸ್.ಮೂರ್ತಿ

ಕಾರ್ಯದರ್ಶಿ(ಪ್ರಭಾರ),

ಕರ್ನಾಟಕ ವಿಧಾನಸಭೆ ಸಚಿವಾಲಯ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಓಐ) ಪ್ರತಿಗಳು: 1000